**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಜೇವರ್ಗಿ.</u>**

**<u>ಸಿ ಸಿ ನಂ.402/2018</u>**

**<u>ಫಿರ್ಯಾದಿದಾರರು :-</u>** ನೆಲೋಗಿ ಪೊಲೀಸ್ ಠಾಣೆ

**: ವಿರುದ್ದ :**

**<u>ಆರೋಪಿತರು:</u>**

ಶಿರಾಜ ಅಹಮದ ತಂದೆ ಮಹ್ಮದ ಖಾಸಿಂ ಜಕಾತಿ
ವಃ 39 ವರ್ಷ, ಉಃ ಒಕ್ಕಲುತನ,
ಸಾಃ ಯಾತನೂರ, ತಾಃ ಜೇವರ್ಗಿ, ಜಿಃ ಕಲಬುರ್ಗಿ,

**<u>ದೋಷಾರೋಪಣೆ</u>**

**ಶ್ರೀ ಕಾಶಿನಾಥ ವಿ. ಉಪ್ಪಾರ್, ಬಿ.ಎಸ್.ಸಿ. ಎಲ್ಎಲ್.ಬಿ.,** ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಜೇವರ್ಗಿ, ಆದ ನಾನು, ಆರೋಪಿತರಾದ ನಿಮ್ಮ ವಿರುದ್ದ ಈ ಕೆಳಕಾಣಿಸಿದ ಅಪಾದನೆಗಳನ್ನು ರೂಪಿಸಿರುತ್ತೆನೆ.

ಆರೋಪಿತನಾದ ನೀನು ದಿನಾಂಕ 01-07-2018 ರಂದು ಸಂಜೆ 06-00 ನೆಲೋಗಿ ಪೊಲೀಸ ಠಾಣೆ ವ್ಯಾಪ್ತಿಯಲ್ಲಿ ಬರುವ ಯಾತನೂರ ಸಿಮಾಂತರದ ಹೊಲ ಸರ್ವೆ ನಂ.81 ರಲ್ಲಿದ್ದ ಎಸ್ ಎಸ್ ಕಂಪನಿಯ ಜಾಗದಲ್ಲಿ, ಆರೋಪಿತನು ಯಾವುದೇ ಪರವಾನಿಗೆ ಇಲ್ಲದೆ ಕಳ್ಳತನದಿಂದ ಸುಮಾರು 20 ಟಿಪ್ಪರನಷ್ಟು ಮರಳನ್ನು ಸಾಗಾಣಿಕೆ ಮಾಡುವ ಸಲುವಾಗಿ ಸಂಗ್ರಹಣೆ ಮಾಡಿರುತ್ತಿರಿ, ಆದ್ದರಿಂದ ನೀವು ಭಾ. ದಂ. ಸಂ. ಕಲಂ 379 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತಿರಿ, ಅದು ನನ್ನ ಸಂಜ್ಞೆಯ ಅಡಿಯಲ್ಲಿ ಬರುತ್ತದೆ.

ನೀವು ಮೇಲೆ ಹೇಳಿದ ಅಪಾದನೆಗೆ ಈ ನ್ಯಾಯಾಲಯದ ಮುಂದೆ ನೀವು ವಿಚಾರಣೆ ಎದುರಿಸಬೇಕೆಂದು ಆದೇಶಿಸುತ್ತೇನೆ.

ದಿನಾಂಕ 24-11-2025

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.

**ಆರೋಪಿಗಳ ಹೇಳಿಕೆ**

ಪ್ರಶ್ನೆ-1: ಈಗ ನಿಮಗೆ ತಿಳಿದ ಭಾಷೆಯಲ್ಲಿ ಓದಿ ಹೇಳಿದ ಆರೋಪಣೆಯನ್ನು ಅರ್ಥಮಾಡಿಕೊಂಡಿದಿರಾ?

ಉ : ಆ-

ಪ್ರಶ್ನೆ -2 : ಆರೋಪಣೆಯನ್ನು ಒಪ್ಪುವಿರಾ ಅಥವಾ ವಿಚಾರಣೆ ನಡೆಸಬೇಕೆ?

ಉ : ಆ-

(ಈ ಮೂಲಕ ದೃಢೀಕರಿಸುವುದೇನೆಂದರೆ ಮೇಲೆ ಕೊಟ್ಟಂತಹ ಹೇಳಿಕೆಗಳು ಆರೋಪಿತರ ನಿಜವಾದ ಹೇಳಿಕೆಗಳಿರುತ್ತವೆಂದು ಪ್ರಮಾಣಿಕರಿಸಲಾಗಿದೆ)

ದಿನಾಂಕ 24-11-2025

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.